# ಫಿಲೆಮೋನನಿಗೆ
## ಬರೆದ ಪತ್ರ

1ಯೇಸು ಕ್ರಿಸ್ತನ ನಿಮಿತ್ತ ಸೆರೆಯಲ್ಲಿರುವ ಪೌಲನೂ
ಸಹೋದರನಾದ ತಿಮೊಥೆಯನೂ ನಮಗೆ ಪ್ರಿಯನಾದ
ಮತ್ತು ನಮ್ಮ ಜೊತೆಕೆಲಸದವನಾದ ಫಿಲೆಮೋನ
ನಿಗೆ, 2ಸಹೋದರಿಯಾದ ಅಪ್ಫಿಯಳಿಗೆ, ನಮ್ಮ ಜೊತೆ
ಸೈನಿಕನಾದ ಅರ್ಖಿಪ್ಪನಿಗೆ ಮತ್ತು ಫಿಲೆಮೋನನ
ಮನೆಯಲ್ಲಿ ಸೇರಿಬರುವ ಸಭೆಯವರೆಲ್ಲರಿಗೆ ಬರೆಯುವ
ಪತ್ರ.
3ನಮ್ಮ ತಂದೆಯಾದ ದೇವರ ಮತ್ತು ಪ್ರಭುವಾದ
ಯೇಸು ಕ್ರಿಸ್ತನ ಕೃಪೆಯೂ ಶಾಂತಿಯೂ ನಿಮ್ಮೊಂದಿ
ಗಿರಲಿ.

### ಫಿಲೆಮೋನನ ಪ್ರೀತಿ ಮತ್ತು ನಂಬಿಕೆ

4ನನ್ನ ಪ್ರಾರ್ಥನೆಗಳಲ್ಲಿ ನಿನ್ನನ್ನು ನೆನಪು ಮಾಡಿಕೊಳ್ಳು
ತ್ತಿರುತ್ತೇನೆ. ಯಾವಾಗಲೂ ನಿನಗಾಗಿ ದೇವರಿಗೆ ಸ್ತೋತ್ರ
ಸಲ್ಲಿಸುತ್ತೇನೆ. 5ದೇವರ ಪರಿಶುದ್ಧ ಜನರ ಮೇಲೆ ನಿನ
ಗಿರುವ ಪ್ರೀತಿಯನ್ನು ಮತ್ತು ಪ್ರಭುವಾದ ಯೇಸುವಿ
ನಲ್ಲಿ ನಿನಗಿರುವ ನಂಬಿಕೆಯನ್ನು ಕೇಳಿದ್ದರಿಂದ ದೇವರಿಗೆ
ಸ್ತೋತ್ರ ಸಲ್ಲಿಸುತ್ತೇನೆ. 6ನೀನು ನಿನ್ನ ನಂಬಿಕೆಯನ್ನು
ಹಂಚಿಕೊಳ್ಳುವುದರಲ್ಲಿ ಕಾರ್ಯ ನಿರತನಾಗಿರುವುದರ
ಮೂಲಕ ಕ್ರಿಸ್ತನಲ್ಲಿ ನಮಗಿರುವ ಎಲ್ಲಾ ಸುವರಗಳನ್ನು
ಅರ್ಥಮಾಡಿಕೊಳ್ಳುವಂತಾಗಲೆಂದು ಪ್ರಾರ್ಥಿಸುತ್ತೇನೆ.
7ನನ್ನ ಸಹೋದರನೇ, ದೇವಜನರಿಗೆ ನೀನು ಪ್ರೀತಿ
ಯನ್ನು ತೋರಿಸಿ ಅವರ ಹೃದಯಗಳನ್ನು ಸಂತೈಸಿರುವೆ.
ಇದು ನನಗೆ ಹೆಚ್ಚಿನ ಸಂತಸವನ್ನೂ ನೆಮ್ಮದಿಯನ್ನೂ
ತಂದುಕೊಟ್ಟಿದೆ.

### ಒನೇಸಿಮನನ್ನು ಸಹೋದರನಂತೆ ಸೇರಿಸಿಕೊ

8ನೀನು ಮಾಡಬೇಕಾದ ಕಾರ್ಯವೊಂದಿದೆ. ಅದನ್ನು
ಮಾಡಬೇಕೆಂದು ಆಜ್ಞಾಪಿಸಲು ನನಗೆ ಕ್ರಿಸ್ತನಲ್ಲಿ ಅಧಿಕಾರ
ವಿದೆ. 9ಆದರೆ ನಾನು ನಿನಗೆ ಆಜ್ಞಾಪಿಸದೆ ಪ್ರೀತಿಯಿಂದ
ನಿನ್ನನ್ನು ಕೇಳಿಕೊಳ್ಳುತ್ತಿದ್ದೇನೆ. ಪೌಲನಾದ ನಾನು
ಈಗ ವೃದ್ಧನಾಗಿದ್ದೇನೆ ಮತ್ತು ಕ್ರಿಸ್ತ ಯೇಸುವಿನ ನಿಮಿತ್ತ
ಸೆರೆಯಲ್ಲಿದ್ದೇನೆ. 10ನನ್ನ ಮಗನಾದ ಒನೇಸಿಮನಿಗಾಗಿ
ನಿನ್ನನ್ನು ಕೇಳಿಕೊಳ್ಳುತ್ತೇನೆ. ನಾನು ಸೆರೆಮನೆಯಲ್ಲಿರು
ವಾಗ ಅವನು ನನ್ನ ಮಗನಾದನು. 11ಹಿಂದೆ ಅವನು
ನಿನಗೆ ನಿಷ್ಪ್ರಯೋಜಕನಾಗಿದ್ದನು. ಆದರೆ ಈಗ ಅವನು
ನಿನಗೂ ನನಗೂ ಪ್ರಯೋಜನ ಉಳ್ಳವನಾಗಿದ್ದಾನೆ.
12ಅವನನ್ನು ನಿನ್ನ ಬಳಿಗೆ ಹಿಂದಕ್ಕೆ ಕಳುಹಿಸುತ್ತಿದ್ದೇನೆ.
ಅವನೊಂದಿಗೆ ನನ್ನ ಹೃದಯವನ್ನೇ ಕಳುಹಿಸುತ್ತಿದ್ದೇನೆ.
13ನಾನೀಗ ಸುವಾರ್ತೆಗೋಸ್ಕರ ಸೆರೆಯಲ್ಲಿರುವಾಗ ನನ್ನ
ಸಹಾಯಕ್ಕೆ ಅವನನ್ನು ಇರಿಸಿಕೊಳ್ಳಬೇಕೆಂದಿದ್ದೆನು. ಇಲ್ಲಿ
ಅವನು ನನಗೆ ಸಹಾಯ ಮಾಡುತ್ತಾ ನಿನ್ನ ಸೇವೆಯನ್ನೂ
ಮಾಡಬಹುದಾಗಿತ್ತು. 14ಆದರೆ ಈ ವಿಷಯದಲ್ಲಿ ನಿನ್ನ
ಒಪ್ಪಿಗೆ ಪಡೆಯದೆ ನಿರ್ಧಾರ ತೆಗೆದುಕೊಳ್ಳಲು ನನಗೆ
ಇಷ್ಟವಿಲ್ಲ. ಏಕೆಂದರೆ ನೀನು ಮಾಡುವ ಒಳ್ಳೆಕಾರ್ಯವು
ಮನಃ ಪೂರ್ವಕವಾಗಿರಬೇಕೇ ಹೊರತು ಬಲತ್ಕಾರ
ದಿಂದಾಗಕೂಡದು.
15ಒನೇಸಿಮನು ಸ್ವಲ್ಪಕಾಲ ನಿನ್ನನ್ನು ಅಗಲಿದ್ದನು.
ಬಹುಶಃ ಅವನು ಎಂದೆಂದಿಗೂ ನಿನ್ನವನಾಗಬೇಕೆಂದು
ಹಾಗಾಯಿತೇನೊ! 16ಇನ್ನು ಮೇಲೆ ಅವನು ನಿನಗೆ
ಕೇವಲ ಗುಲಾಮನಾಗಿರದೆ ಗುಲಾಮನಿಗಿಂತಲೂ
ಹೆಚ್ಚಿನ ಪ್ರಿಯ ಸಹೋದರನಾಗಿದ್ದಾನೆ. ಅವನನ್ನು
ಬಹಳವಾಗಿ ಪ್ರೀತಿಸುತ್ತೇನೆ. ಆದರೆ ನೀನು ಅವನನ್ನು
ಮತ್ತಷ್ಟು ಹೆಚ್ಚಾಗಿ ಪ್ರೀತಿಸುವೆ. ನೀನು ಅವನನ್ನು
ಮನುಷ್ಯನೆಂದು ಮತ್ತು ಪ್ರಭುವಿನಲ್ಲಿ ಒಬ್ಬ ಸಹೋದರ
ನೆಂದು ಪ್ರೀತಿಸುವೆ.
17ನನ್ನನ್ನು ನಿನ್ನ ಸಹಭಾಗಿಯೆಂದು ನೀನು ಒಪ್ಪಿ
ಕೊಳ್ಳುವುದಾದರೆ, ಒನೇಸಿಮನನ್ನು ಮತ್ತೆ ಸೇರಿಸಿಕೊ.
ನೀನು ನನ್ನನ್ನು ಬರಮಾಡಿಕೊಂಡಂತೆ ಅವನನ್ನೂ
ಬರಮಾಡಿಕೊ. 18ಅವನು ನಿನಗೇನಾದರೂ ತಪ್ಪು
ಮಾಡಿದ್ದರೆ ಅದನ್ನು ನನ್ನ ಮೇಲೆ ಹೊರಿಸು; ನಿನ
ಗೇನಾದರೂ ಕೊಡಬೇಕಿದ್ದರೆ, ಅದನ್ನು ನನ್ನ ಲೆಕ್ಕಕ್ಕೆ
ಹಾಕು. 19ಪೌಲನಾದ ನಾನು ನನ್ನ ಸ್ವಂತ ಕೈಗ
ಳಿಂದ ಇದನ್ನು ಬರೆಯುತ್ತಿದ್ದೇನೆ. ಒನೇಸಿಮನು ನಿನಗೆ
ಏನಾದರೂ ಕೊಡಬೇಕಾಗಿದ್ದರೆ ನಾನು ಅದನ್ನು ಕೊಡು
ತ್ತೇನೆ. ನಿನ್ನ ಆತ್ಮಿಕ ಜೀವಿತದ ವಿಷಯದಲ್ಲಿ ನೀನು
ನಿನಗೆ ನನಗೆಷ್ಟು ಋಣಿಯಾಗಿರುವೆ ಎಂದು ನಾನೇನೂ
ಹೇಳುವುದಿಲ್ಲ. 20ನನ್ನ ಸಹೋದರನೇ, ಪ್ರಭುವಿನಲ್ಲಿ
ನಾನು ನಿನ್ನಿಂದ ಒಂದು ಸಹಾಯವನ್ನು ಹೊಂದಿಕೊಳ್ಳ
ಬಹುದೇ? ಅದೇನೆಂದರೆ ನೀನು ನನ್ನ ಹೃದಯವನ್ನು
ಕ್ರಿಸ್ತನಲ್ಲಿ ಸಂತೈಸು. 21ನಾನು ಕೇಳಿಕೊಂಡದ್ದನ್ನು
ನೀನು ಮಾಡುವೆ ಎಂದು ನನಗೆ ಗೊತ್ತಿರುವುದರಿಂದಲೇ
ನಾನು ಈ ಪತ್ರವನ್ನು ಬರೆಯುತ್ತಿದ್ದೇನೆ. ನಾನು ಕೇಳಿದ್ದ
ಕ್ಕಿಂತಲೂ ಹೆಚ್ಚಿಗೆ ನೀನು ಮಾಡುವೆ ಎಂದು ನನಗೆ
ತಿಳಿದಿದೆ.
22ನಾನು ಇಳಿದುಕೊಳ್ಳಲು ಒಂದು ಕೊಠಡಿಯನ್ನು

ದಯವಿಟ್ಟು ಸಿದ್ಧಗೊಳಿಸು. ದೇವರು ನಿನ್ನ ಪ್ರಾರ್ಥನೆ
ಗಳನ್ನು ಕೇಳಿ ನನ್ನನ್ನು ನಿಮ್ಮ ಬಳಿಗೆ ಬರಲು ಅವಕಾಶ
ನೀಡುವನೆಂಬ ಭರವಸೆ ನನಗಿದೆ.

**ಅಂತಿಮ ವಂದನೆಗಳು**

23ಕ್ರಿಸ್ತಯೇಸುವಿನ ನಿಮಿತ್ತ ನನ್ನೊಂದಿಗೆ ಸೆರೆಮನೆ
ಯಲ್ಲಿರುವ ಎಪಫ್ರನು ವಂದನೆ ತಿಳಿಸಿದ್ದಾನೆ. 24ಮಾರ್ಕ,
ಆರಿಸ್ತಾರ್ಕ, ದೇಮ, ಲೂಕ ಇವರುಗಳು ನಿನಗೆ ವಂದನೆ
ತಿಳಿಸಿದ್ದಾರೆ. ಇವರೆಲ್ಲರೂ ನನ್ನ ಜೊತೆಕೆಲಸಗಾರ
ರಾಗಿದ್ದಾರೆ.
25ನಮ್ಮ ಪ್ರಭುವಾದ ಯೇಸು ಕ್ರಿಸ್ತನ ಕೃಪೆಯು ನಿಮ್ಮ
ಆತ್ಮದೊಂದಿಗಿರಲಿ.